1/5
25/3/22

# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2695 |
| ಮಾನ್ಯ ಸದಸ್ಯರ ಹೆಸರು | ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 25.03.2022 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಂಬಿಗರ ಚೌಡಯ್ಯ, ಉಪ್ಪಾರ, ಆರ್ಯವೈಶ್ಯ, ನಿಗಮಗಳನ್ನು ಯಾವ ದಿನಾಂಕದಿಂದ ಜಾರಿಗೆ ತರಲಾಗಿದೆ; (ಸಂಪೂರ್ಣ ವಿವರ ನೀಡುವುದು) | ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮವನ್ನು 10 ನವೆಂಬರ್ 2017ರಂದು ಕಂಪನಿ ಕಾಯ್ದೆ 2013ರನ್ವಯ ನೋಂದಣಿ ಮಾಡಿಸುವ ಮೂಲಕ ಕಾರ್ಯಾರಂಭ ಮಾಡಲಾಗಿರುತ್ತದೆ.<br><br>ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮವನ್ನು 31 ಅಕ್ಟೋಬರ್ 2017ರಂದು ಕಂಪನಿ ಕಾಯ್ದೆ 2013ರನ್ವಯ ನೋಂದಣಿ ಮಾಡಿಸುವ ಮೂಲಕ ಕಾರ್ಯಾರಂಭ ಮಾಡಲಾಗಿರುತ್ತದೆ.<br><br>ಸಾಮಾನ್ಯ ವರ್ಗಕ್ಕೆ ಸೇರಿದ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮವನ್ನು 2013ರ ಕಂಪನಿ ಕಾಯ್ದೆ ಅನ್ವಯ ದಿನಾಂಕ: 13-06-2019ರಂದು ನೋಂದಣಿ ಮಾಡಿಸುವ ಮೂಲಕ ಕಾರ್ಯಾರಂಭ ಮಾಡಲಾಗಿರುತ್ತದೆ. |
| ಆ) | ಈ ನಿಗಮಗಳಲ್ಲಿ ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡವೇನು; (ಫಲಾನುಭವಿಗಳಿಗೆ ನೀಡಲಾಗುತ್ತಿರುವ ಯೋಜನೆಯ ವಿವರ ನೀಡುವುದು) | ನಿಗಮಗಳು ಯೋಜನೆಗಳಲ್ಲಿ ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳ ವಿವರಗಳನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ. |
| ಇ) | ನಿಗಮಗಳ ಪ್ರಾರಂಭದಿಂದ ಇಲ್ಲಿಯವರೆಗೆ ಆಯ್ಕೆ ಮಾಡಲಾದ ಫಲಾನುಭವಿಗಳ ಸಂಖ್ಯೆ ಎಷ್ಟು; ಅವರಿಗೆ ನೀಡಲಾದ ಅನುದಾನ ಎಷ್ಟು; (ಸಂಪೂರ್ಣ ಮಾಹಿತಿ ನೀಡುವುದು) | ನಿಗಮಗಳು ಪ್ರಾರಂಭದಿಂದ ಇಲ್ಲಿಯವರೆಗೆ ಆಯ್ಕೆ ಮಾಡಲಾದ ಫಲಾನುಭವಿಗಳ ಹಾಗೂ ಅನುದಾನದ ವಿವರಗಳನ್ನು ಅನುಬಂಧ-2 ರಲ್ಲಿ ಲಗತ್ತಿಸಿದೆ. |
| ಈ) | ರಾಜ್ಯದಲ್ಲಿ ಹಡಪದ ಅಭಿವೃದ್ಧಿ ನಿಗಮ ಸ್ಥಾಪನೆಗೆ ಒತ್ತಾಯ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ | ಭಾರತ ಸಂವಿಧಾನದ ಅನುಚ್ಛೇದ 15(4)ರಂತೆ ವಿದ್ಯಾ ಸಂಸ್ಥೆಗಳಲ್ಲಿ ಪ್ರವೇಶ ಮತ್ತು ಅನುಚ್ಛೇದ 16(4)ರ ಮೇರೆಗೆ ನೇಮಕಾತಿಗಳಲ್ಲಿ ಮೀಸಲಾತಿಗಳನ್ನು ಕಲ್ಪಿಸಲು ರಾಜ್ಯದಲ್ಲಿ |

| | | |
|---|---|---|
| | ಕ್ರಮಗಳೇನು; (ಮಾಹಿತಿ ನೀಡುವುದು) | ಹಿಂದುಳಿದ ವರ್ಗಗಳನ್ನು ಗುರುತಿಸಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30.03.2002 ರ ಆದೇಶದ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯಲ್ಲಿಯ ಪ್ರವರ್ಗ-II(A) ನಲ್ಲಿ **'ಹಡಪದ'**ವೂ ಸೇರಿ ಕ್ರಮ ಸಂಖ್ಯೆ:8ರಲ್ಲಿರುವ ಜಾತಿಗಳಿಗೆ ಅನುಕೂಲವಾಗುವಂತೆ **'ಸವಿತ ಸಮಾಜ ಅಭಿವೃದ್ಧಿ ನಿಗಮ'**ವನ್ನು ಸ್ಥಾಪಿಸಿ ವಿವಿಧ ಯೋಜನೆಗಳನ್ನು ರೂಪಿಸಿ ಸಮುದಾಯದವರಿಗೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಆದ್ದರಿಂದ ಸದರಿ ಸಮಾಜದ ಅಭಿವೃದ್ಧಿಗಾಗಿ ಪ್ರತ್ಯೇಕವಾಗಿ ನಿಗಮ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ: ಹಿಂವಕ 79 ಬಿಸಿಎ 2022

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು

ಅನುಬಂಧ-1

<u>ಮಾನದಂಡಗಳ ವಿವರಗಳು:</u>

## ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ:

1. ಹಿಂದುಳಿದ ವರ್ಗಗಳ ಪ್ರವರ್ಗ-1ರಲ್ಲಿ ಬರುವ ಬೆಸ್ತ, ಕೋಲಿ, ಕಬ್ಬಲಿಗ, ಗಂಗಾಮತ, ಮೊಗವೀರ ಮತ್ತು ಇದರ ಉಪಜಾತಿಗಳಿಗೆ ಸೇರಿದವರಾಗಿರಬೇಕು ಹಾಗೂ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/-ಗಳು ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳ ಒಳಗಿರಬೇಕು.
2. ಸ್ವಯಂ ಉದ್ಯೋಗ ಮಾಡುವವರಿಗೆ ಆರ್ಥಿಕ ಚಟುವಟಿಕೆಗಳಿಗೆ ಸೌಲಭ್ಯ ಒದಗಿಸಲಾಗುವುದು.
3. ಅರ್ಜಿದಾರರು 18 ರಿಂದ 55 ವರ್ಷ ವಯೋಮಿತಿಯವರಾಗಿರಬೇಕು.
4. ಜಿಲ್ಲಾ ಪಂಚಾಯಿತಿಯ ಮಾನ್ಯ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಆಯ್ಕೆ ಸಮಿತಿ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು.

**ಅರಿವು ಶೈಕ್ಷಣಿಕ ಸಾಲ ಯೋಜನೆ**

5. ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.3.50 ಲಕ್ಷಗಳ ಮಿತಿಯಲ್ಲಿರಬೇಕು.
6. ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ (ಸಿ.ಇ.ಟಿ) ಪ್ರವೇಶ ಪಡೆದಿರಬೇಕು.
7. ವಿದ್ಯಾರ್ಥಿಗಳನ್ನು ಆಯಾ ಜಿಲ್ಲೆಯ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಆಯ್ಕೆ ಮಾಡಲಾಗುವುದು.
8. ವ್ಯಾಸಂಗದ ಕೋರ್ಸುಗಳು (1)ಬಿ.ಇ, (2)ಎಂ.ಬಿ.ಬಿ.ಎಸ್, (3)ಬಿ.ಯೂ.ಎಂ.ಎಸ್, (4) ಬಿ.ಡಿ.ಎಸ್ (5) ಬಿ.ಎ.ಎಂ.ಎಸ್ (6) ಬಿ.ಎಚ್.ಎಂ.ಎಸ್, (7) ಎಂ.ಬಿ.ಎ, (8) ಎಂಟೆಕ್ (9) ಎಂ.ಇ, (10) ಎಂ.ಡಿ (11) ಪಿಹೆಚ್‌ಡಿ, (12) ಬಿ.ಸಿ.ಎ/ಎಂ.ಸಿ.ಎ. (13) ಎಂ.ಎಸ್ ಅಗ್ರಿಕಲ್ಚರ್ (14)ಬಿ.ಎಸ್.ಸಿ.ನರ್ಸಿಂಗ್, (15)ಬಿ.ಫಾರಂ/ಎA.ಫಾರA (16) ಬಿ.ಎಸ್.ಸಿ ಫ್ಯಾರಾ ಮೆಡಿಕಲ್, (17) ಬಿ.ಎಸ್.ಸಿ ಬಯೋ ಟೆಕ್ನಾಲಾಜಿ (18) ಬಿ.ಟೆಕ್ (19) ಬಿ.ಪಿ.ಟಿ (20) ಬಿ.ವಿ.ಎಸ್.ಸಿ/ಎಂ.ವಿ.ಎಸ್.ಸಿ (21) ಬಿ.ಎನ್.ಎಂ (22) ಎಂ.ಎಫ್.ಎ (23) ಎಂ.ಎಸ್.ಸಿ ಬಯೋ ಟೆಕ್ನಾಲಾಜಿ ಮತ್ತು (24) ಎಂ.ಎಸ್.ಸಿ ಎಜಿ (25) ಎಂ.ಕಾA (26) ಎಂ.ಎಸ್ಸಿ. ಇತ್ಯಾದಿ.

**ಗಂಗಾ ಕಲ್ಯಾಣ ನೀರಾವರಿ ಯೋಜನೆ**

9. ಈ ಯೋಜನೆಯಲ್ಲಿ ಹಿಂದುಳಿದ ವರ್ಗಗಳ ಪವರ್ಗ-1ಎಗೆ ಸೇರಿದ ಬೆಸ್ತ, ಕೋಲಿ, ಕಬ್ಬಲಿಗ, ಗಂಗಾಮತ, ಮೊಗವೀರ ಮತ್ತು ಇದರ ಸಮುದಾಯದ ಉಪಜಾತಿಗಳಿಗೆ ಸೇರಿದ ಸಣ್ಣ ಮತ್ತು ಅತಿಸಣ್ಣ ರೈತರಿಗೆ ಬೆಂಗಳೂರು ಉತ್ತರ ಜಿಲ್ಲೆಗೆ ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಇರುವ ಕನಿಷ್ಠ 2 ಎಕರೆ ಜಮೀನು ಒಂದಿರಬೇಕು. ಸಣ್ಣ ಮತ್ತು ಅತಿಸಣ್ಣ ರೈತರಾಗಿರಬೇಕು.ಘಟಕವೆಚ್ಚ ರೂ.4.00 ಲಕ್ಷಗಳು ಇದರಲ್ಲಿ ರೂ.3.50 ಲಕ್ಷಗಳ ಸಹಾಯಧನ (ಸಬ್ಸಿಡಿ) ಹಾಗೂ ಸಾಲದ ಮೊತ್ತ ರೂ.50,000/-ಗಳು ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ಸಾಲ. ಕೊರೆದ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಿ ಆರ್.ಆರ್. ಸಂಖ್ಯೆ ನೀಡಿದ ನಂತರ ವಿದ್ಯುದ್ದೀಕರಣ ವೆಚ್ಚವಾಗಿ ಪ್ರತಿ ಕೊಳವೆ ಬಾವಿಗಳಿಗೆ ರೂ.50,000/-ಗಳಂತೆ ಒಟ್ಟು ಘಟಕ ವೆಚ್ಚದಲ್ಲಿ ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸಲಾಗುವುದು. ಮೇಲ್ಕಂಡ ಎಲ್ಲಾ ಯೋಜನೆಗಳಡಿ ಫಲಾನುಭವಿಗಳ ಆಯ್ಕೆಗೆ ಆಯಾ ಜಿಲ್ಲೆಯ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಲಾಗುವುದು.

# ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ(ನಿ)

1. ಸ್ವಯಂ ಉದ್ಯೋಗ ಯೋಜನೆ
   i. ಹಿಂದುಳಿದ ವರ್ಗಗಳ ಪ್ರವರ್ಗ 1ರಲ್ಲಿ ಉಪ್ಪಾರ ಮತ್ತು ಇದರ ಉಪಜಾತಿಯವರು ಸೇರಿದವರಾಗಿರಬೇಕು.
   ii. ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/-ಗಳು ಪಟ್ಟಣ ಪ್ರದೇಶದವರಿಗೆ ರೂ.1,20,000/-ಗಳ ಒಳಗಿರಬೇಕು.
   iii. ಅರ್ಜಿದಾರರ ವಯಸ್ಸು 18 ರಿಂದ 55 ವರ್ಷದೊಳಗಿರಬೇಕು.
   iv. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
   v. ಈ ಹಿಂದೆ ಈಗಾಗಲೇ ಸರ್ಕಾರದ/ನಿಗಮದ ಯೋಜನೆಗಳಡಿಯಲ್ಲಿ ಸೌಲಭ್ಯ ಪಡೆದಿರಬಾರದು.

2. ಅರಿವು ಯೋಜನೆ
   i. ಹಿಂದುಳಿದ ವರ್ಗಗಳ ಪ್ರವರ್ಗ 1ರಲ್ಲಿ ಉಪ್ಪಾರ ಮತ್ತು ಇದರ ಉಪಜಾತಿಯವರು ಸೇರಿದವರಾಗಿರಬೇಕು.
   ii. ಅಭ್ಯರ್ಥಿಗಳ ಕುಟುಂಬದ ವಾರ್ಷಿಕ ವರಮಾನ ರೂ.3.50 ಲಕ್ಷಗಳ ಮಿತಿಯಲ್ಲಿರಬೇಕು.
   iii. ಸಾಮಾನ್ಯ ಪ್ರವೇಶ ಪರೀಕ್ಷೆ ಮೂಲಕ (ಸಿ.ಇ.ಟಿ) ಪ್ರವೇಶ ಪಡೆದಿರಬೇಕು.

3. ಗಂಗಾಕಲ್ಯಾಣ ಯೋಜನೆ
   i. ಹಿಂದುಳಿದ ವರ್ಗಗಳ ಪ್ರವರ್ಗ 1ರಲ್ಲಿ ಉಪ್ಪಾರ ಮತ್ತು ಇದರ ಉಪಜಾತಿಯವರು ಸೇರಿದವರಾಗಿರಬೇಕು.
   ii. ಸಣ್ಣ ಮತ್ತು ಅತೀ ಸಣ್ಣ ರೈತರಾಗಿರಬೇಕು.
   iii. ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ.98,000/-ಗಳ ಒಳಗಿರಬೇಕು.
   iv. ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.
   v. ಈ ಹಿಂದೆ ಈಗಾಗಲೇ ಸರ್ಕಾರದ/ನಿಗಮದ ಬೇರೆ ಯಾವುದಾದರೂ ಯೋಜನೆಗಳಡಿಯಲ್ಲಿ ಸೌಲಭ್ಯ ಪಡೆದಿರಬಾರದು.

# ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮ

## ಅರಿವು-ಶೈಕ್ಷಣಿಕ ಸಾಲ ಯೋಜನೆ:

ಈ ಯೋಜನೆಯಡಿ ಇಂಜಿನಿಯರಿಂಗ್, ವೈದ್ಯಕೀಯ, ದಂತ ವೈದ್ಯಕೀಯ, ಪಿ.ಹೆಚ್.ಡಿ ಇತ್ಯಾದಿ ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸ್‌ಗಳಲ್ಲಿ CET ಮೂಲಕ ಆಯ್ಕೆಯಾಗಿ ವ್ಯಾಸಂಗ ಮಾಡುವ ಆರ್ಯ ವೈಶ್ಯ ಸಮುದಾಯದ ವಿದ್ಯಾರ್ಥಿಗಳಿಗೆ ವಾರ್ಷಿಕ ಶೇ.2ರ ಬಡ್ಡಿದರದಲ್ಲಿ ವಾರ್ಷಿಕ ಗರಿಷ್ಠ ರೂ.1,00,000/-ಗಳ ಶೈಕ್ಷಣಿಕ ಸಾಲವನ್ನು ಮಂಜೂರು ಮಾಡುವುದು.

1. **ಅರ್ಹತೆ:** ಸಾಮಾನ್ಯ ವರ್ಗದಲ್ಲಿ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿದವರಾಗಿಬೇಕು. (ನಮೂನೆ-ಜಿ ನಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು)
2. **ಆದಾಯ ಮಿತಿ:** ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ.6,00,000/-ಗಳ ಮಿತಿ ಒಳಗಿರಬೇಕು.
3. **ವಯೋಮಿತಿ:** ಅರ್ಜಿದಾರರು 18 ವರ್ಷ ಮೇಲ್ಪಟ್ಟು 35 ವರ್ಷದೊಳಗಿನವರಾಗಿರಬೇಕು.
4. **ವಿಳಾಸ:** ಅರ್ಜಿದಾರರು ಕರ್ನಾಟಕದ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು.
5. **ಮಹಿಳೆಯರ ಮೀಸಲಾತಿ:** ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಶೇ.33 ರಷ್ಟು ಮಹಿಳಾ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು.
6. **ವಿಶೇಷಚೇತನರ (ಅಂಗವಿಕಲರ) ಮೀಸಲಾತಿ:** ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಶೇ.5 ರಷ್ಟು ವಿಶೇಷಚೇತನ ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕು.
7. ಒಂದು ಕುಟುಂಬದಲ್ಲಿ ಎರಡು ವಿದ್ಯಾರ್ಥಿಗಳಿಗೆ ಮಾತ್ರ ಆಯ್ಕೆ ಮಾಡಬೇಕು.
8. ಅ. **ಫೀ ಸ್ಟ್ರಕ್ಚರ್:** Karnataka Examination Authority ರವರಿಂದ ನಿಗದಿಪಡಿಸಿರುವ CET ಫೀಯನ್ನು ಮತ್ತು ಪ್ರವೇಶ ಶುಲ್ಕ, ಟ್ಯುಷನ್ ಫೀ, ಹಾಸ್ಟೆಲ್ ಫೀ, ಪುಸ್ತಕ, ಲ್ಯಾಪ್ ಟಾಪ್, ಪರೀಕ್ಷಾ ಶುಲ್ಕ ಇತ್ಯಾದಿ ಫೀಗಳನ್ನು ವಾರ್ಷಿಕ ರೂ. 1,00,000/- ಮಿತಿಯೊಳಗೆ ಸಾಲ ನೀಡಲು ಪ್ರಸ್ತಾಪಿಸಿದೆ. CET ಮುಖಾಂತರ ಆಯ್ಕೆಯಾಗಿರುವ ಕಾಲೇಜಿನ ಪ್ರಾಂಶುಪಾಲರಿಂದ ಧೃಡೀಕರಿಸಿ ನೀಡಿರುವ FEE STRUCTURE ಅನ್ವಯ ಸಾಲ ನೀಡುವುದು.

   ಆ. **ಹಾಸ್ಟೆಲ್ ಫೀ:** ವಿದ್ಯಾರ್ಥಿಯು ವ್ಯಾಸಂಗ ಮಾಡುತ್ತಿರುವ ಕಾಲೇಜಿನಲ್ಲೇ ಹಾಸ್ಟೆಲ್ ಸೌಲಭ್ಯ ಪಡೆದಿದ್ದಲ್ಲಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರ ದೃಢೀಕರಣ ಪತ್ರ ಹಾಗೂ ಜಿಲ್ಲಾ ವ್ಯವಸ್ಥಾಪಕರ ತಪಾಸಣ ವರದಿಯನ್ನು ಪಡೆದು ಹಾಸ್ಟೆಲ್ ಫೀ ಮಂಜೂರು ಮಾಡುವುದು.
9. **ಆಯ್ಕೆ ವಿಧಾನ:** ಈ ಯೋಜನೆಯಲ್ಲಿ ಅರ್ಹ ಫಲಾನುಭವಿಗಳನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಲಾಗುವುದು.
10. **ಸಾಲದ ಮರುಪಾವತಿ ಅವಧಿ:** ಈ ಯೋಜನೆ ಅಡಿಯಲ್ಲಿ ಪಡೆದ ಸಾಲವನ್ನು 3 ವರ್ಷಗಳ ಅವಧಿಯಲ್ಲಿ 36 ಮಾಸಿಕ ಕಂತುಗಳಲ್ಲಿ ಅಸಲು ಮತ್ತು ಬಡ್ಡಿ ಸೇರಿಸಿ ಮರುಪಾವತಿಸಬೇಕು. ವಿದ್ಯಾರ್ಥಿಯು ವ್ಯಾಸಂಗ ಪೂರ್ಣಗೊಂಡ 4ನೇ ತಿಂಗಳಿನಿಂದ ಮರುಪಾವತಿ ಪ್ರಾರಂಭವಾಗುವುದು. (ಈ 4 ತಿಂಗಳನ್ನು ವಿರಾಮ ಅವಧಿ ಎಂದು ಪರಿಗಣಿಸಲಾಗುವುದು).
11. ಅರ್ಜಿದಾರರು ಆಧಾರ್ ಕಾರ್ಡ್ ಹೊಂದಿರಬೇಕು.

## I. ಸ್ವಯಂ ಉದ್ಯೋಗ ನೇರಸಾಲ ಯೋಜನೆ:-

ಈ ಯೋಜನೆಯಲ್ಲಿ ಆರ್ಯ ವೈಶ್ಯ ಸಮುದಾಯದವರಿಗೆ ಸೇರಿದ ಅರ್ಜಿದಾರರು ಸ್ವಯಂ ಉದ್ಯೋಗ ಕೈಗೊಳ್ಳಲು ಸಾಂಪ್ರದಾಯಿಕ ವೃತ್ತಿಗಳಲ್ಲದೆ ಇತರೆ ವೃತ್ತಿಗಳಾದ ಹಸು ಸಾಕಾಣಿಕೆ, ವ್ಯಾಪಾರ ಚಟುವಟಿಕೆಗಳು ಸೇವಾ ಚಟುವಟಿಕೆಗಳು, ಕೈಗಾರಿಕೆ ಚಟುವಟಿಕೆಗಳು, ಇತ್ಯಾದಿ ಚಟುವಟಿಕೆಗಳನ್ನು ಕೈಗೊಳ್ಳಲು ನಿಗಮದ ಈ ಯೋಜನೆಯಲ್ಲಿ ಗರಿಷ್ಠ ರೂ.1,00,000/-ಗಳ ಆರ್ಥಿಕ ನೆರವು ಒದಗಿಸಲಾಗುವುದು. ಈ ಮೊತ್ತದಲ್ಲಿ ಶೇ.20ರಷ್ಟು ಗರಿಷ್ಠ ರೂ.20,000/-ಗಳ ಸಹಾಯಧನ ಹಾಗೂ ಉಳಿಕೆ ಮೊತ್ತವಾದ ಶೇ.80ರಷ್ಟು ಗರಿಷ್ಠ ರೂ.80,000/-ಗಳ ಸಾಲವನ್ನು ವಾರ್ಷಿಕ ಶೇ.4ರ ಬಡ್ಡಿ ದರದಲ್ಲಿ ಮಂಜೂರು ಮಾಡುವುದು.

ಈ ಯೋಜನೆ ಅಡಿಯಲ್ಲಿ ಘಟಕ ವೆಚ್ಚವು ಕನಿಷ್ಠ ರೂ.50,000/- ಗಳಾಗಿರಬೇಕು ಹಾಗೂ ಈ ಮೊತ್ತಕ್ಕೆ ಸಹಾಯಧನವು ಕನಿಷ್ಠ ಶೇ.20ರಷ್ಟು ಅಂದರೆ ರೂ.10,000/- ಗಳು, ಬಾಕಿ ಮೊತ್ತಕ್ಕೆ ಶೇ.4ರ ಬಡ್ಡಿ ದರದಲ್ಲಿ ಮಂಜೂರು ಮಾಡುವುದು.

1. **ಅರ್ಹತೆ:** ಸಾಮಾನ್ಯ ವರ್ಗದಲ್ಲಿ ಆರ್ಯ ವೈಶ್ಯ ಸಮುದಾಯಕ್ಕೆ ಸೇರಿದವರಾಗಿರಬೇಕು. (ನಮೂನೆ-ಜಿ ನಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು)
2. **ಆದಾಯ ಮಿತಿ:** ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ ಗ್ರಾಮಾಂತರ ಮತ್ತು ನಗರ ಪ್ರದೇಶದವರಿಗೆ ರೂ.3,00,000/-ಗಳ ಮಿತಿ ಒಳಗಿರಬೇಕು.
3. **ವಯೋಮಿತಿ:** ಅರ್ಜಿದಾರರು 18 ವರ್ಷ ಮೇಲ್ಪಟ್ಟು 45 ವರ್ಷದೊಳಗಿನವರಾಗಿರಬೇಕು.
4. **ವಿಳಾಸ:** ಅರ್ಜಿದಾರರು ಕರ್ನಾಟಕದ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು.
5. **ಮಹಿಳೆಯರ ಮೀಸಲಾತಿ:** ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಶೇ.33 ರಷ್ಟು ಮಹಿಳಾ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು. ಈ ಮೀಸಲಾತಿಯಲ್ಲಿ ಶೇ.50 ರಷ್ಟು ವಿಧವೆಯರು ಮತ್ತು ವಿಚ್ಛೆದನೆಯಾಗಿರುವ ಮಹಿಳಾ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು.
6. **ವಿಶೇಷಚೇತನರ (ಅಂಗವಿಕಲರ) ಮೀಸಲಾತಿ:** ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಶೇ.5 ರಷ್ಟು ವಿಶೇಷಚೇತನ ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕು.
7. ಒಂದು ಕುಟುಂಬದಲ್ಲಿ ಒಂದು ಫಲಾನುಭವಿಯನ್ನು ಮಾತ್ರ ಆಯ್ಕೆ ಮಾಡಬೇಕು.
8. **ಆಯ್ಕೆ ವಿಧಾನ:** ಈ ಯೋಜನೆಯಲ್ಲಿ ಅರ್ಹ ಫಲಾನುಭವಿಗಳನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಲಾಗುವುದು.
9. **ಸಾಲದ ಮರುಪಾವತಿ ಅವಧಿ:** ಈ ಯೋಜನೆ ಅಡಿಯಲ್ಲಿ ಪಡೆದ ಸಾಲವನ್ನು 3 ವರ್ಷಗಳ ಅವಧಿಯಲ್ಲಿ 34 ಮಾಸಿಕ ಕಂತುಗಳಲ್ಲಿ ಅಸಲು ಮತ್ತು ಬಡ್ಡಿ ಸೇರಿಸಿ ಮರುಪಾವತಿಸಬೇಕು 2 ತಿಂಗಳ ವಿರಾಮ ಅವಧಿ ಇರುತ್ತದೆ.
10. ಅರ್ಜಿದಾರರು ಆಧಾರ್ ಕಾರ್ಡ್ ಹೊಂದಿರಬೇಕು.

ಅನುಬಂಧ-2

ಸದರಿ ನಿಗಮಗಳ ವಿವಿಧ ಯೋಜನೆಯಡಿ ಆಯ್ಕೆ ಮಾಡಲಾದ ಫಲಾನುಭವಿಗಳ ಹಾಗೂ ಅನುದಾನದ ವಿವರಗಳು:

## ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ

| ಕ್ರ ಸಂ | ಯೋಜನೆ ಹೆಸರು | ಫಲಾನುಭವಿಗಳ ಸಂಖ್ಯೆ | | | | | |
|---|---|---|---|---|---|---|---|
| | | 2018-19 | | 2019-20 | | 2020-21 | |
| | | ಭೌ | ಆ | ಭೌ | ಆ | ಭೌ | ಆ |
| 1 | ಸ್ವಯಂ ಉದ್ಯೋಗ ಸಾಲ ಯೋಜನೆ | 434 | 210.70 | 920 | 415.30 | 496 | 248.00 |
| 2 | ಅರಿವು ಶೈಕ್ಷಣಿಕ ಸಾಲ ಯೋಜನೆ | 110 | 88.31 | 95 | 69.52 | 25 | 14.65 |
| 3 | ಗಂಗಾ ಕಲ್ಯಾಣ ಯೋಜನೆ | 43 | 89.00 | 175 | 362.00 | 244 | 500.00 |
| 4 | ಕಿರುಸಾಲ/ಸ್ವ-ಸಹಾಯ ಗುಂಪುಗಳಿಗೆ ಯೋಜನೆ | - | - | - | - | 694 | 128.80 |
| 5 | ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಾಲ ಯೋಜನೆ | - | - | - | - | 60 | 16.75 |
| 6 | ಕೌಶಲ್ಯಾಭಿವೃದ್ಧಿ/ಉದ್ಯಮಶೀಲತಾ ತರಬೇತಿ | - | - | - | - | 24 | 0.20 |
| | ಒಟ್ಟು | 587 | 350.51 | 1190 | 799.52 | 1554 | 908.40 |

2020-21ನೇ ಸಾಲಿನ ಗಂಗಾ ಕಲ್ಯಾಣ ಯೋಜನೆಯಡಿ ಆಯ್ಕೆಯಾದ ಫಲಾನುಭವಿಗಳಿಗೆ ಕೊಳವೆ ಬಾವಿ ಕೊರೆಯಲು ಟೆಂಡರ್ ಆಹ್ವಾನಿಸುವ ಬಗ್ಗೆ ಸರ್ಕಾರದಿಂದ ಮಾರ್ಗಸೂಚಿ ಅನುಮೋದನೆ ನೀಡಿದ ನಂತರ ನಿಯಮಾನುಸಾರ ಅಗತ್ಯ ಕ್ರಮವಹಿಸಲಾಗುವುದು.

## ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ

(ಮೊತ್ತ ರೂ.ಲಕ್ಷಗಳಲ್ಲಿ)

| ಯೋಜನೆಯ ಹೆಸರು | 2018-19 | | 2019-20 | | 2020-21 | |
|---|---|---|---|---|---|---|
| | ಫಲಾನುಭವಿಗಳ ಸಂಖ್ಯೆ | ಮೊತ್ತ | ಫಲಾನುಭವಿಗಳ ಸಂಖ್ಯೆ | ಮೊತ್ತ | ಫಲಾನುಭವಿಗಳ ಸಂಖ್ಯೆ | ಮೊತ್ತ |
| ಸ್ವಯಂ ಉದ್ಯೋಗ ಸಾಲ ಯೋಜನೆ | 467 | 228.70 | 839 | 419.50 | 488 | 252.50 |
| ಅರಿವು ಶೈಕ್ಷಣಿಕ ಸಾಲ ಯೋಜನೆ | 86 | 113.76 | 66 | 88.96 | 38 | 54.40 |
| ಗಂಗಾಕಲ್ಯಾಣ ನೀರಾವರಿ ಯೋಜನೆ | 46 | 97.00 | 198 | 411.00 | - | - |
| ಒಟ್ಟು | 599 | 439.46 | 1103 | 919.46 | 526 | 306.90 |

# ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮ

ಸ್ವಯಂ ಉದ್ಯೋಗ ನೇರ ಸಾಲ:

| ಕ್ರ.ಸಂ | ವರ್ಷ | ಫಲಾನುಭವಿಗಳ ಸಂಖ್ಯೆ | ಅನುದಾನ |
|---|---|---|---|
| 1 | 2018-19 | 1017 | 881.63 |
| 2 | 2019-20 | | |
| 3 | 2020-21 | 532 | 418.50 |
| 4 | 2021-22 | 410 | 360.00 |

ಅರಿವು ಶೈಕ್ಷಣಿಕ ಸಾಲ ಯೋಜನೆ:

| ಕ್ರ.ಸಂ | ವರ್ಷ | | ಫಲಾನುಭವಿಗಳ ಸಂಖ್ಯೆ | ಅನುದಾನ |
|---|---|---|---|---|
| 1 | 2018-19 | ನವೀನ | 30 | 26.53 |
| 2 | 2019-20 | | | |
| 3 | 2020-21 | ನವೀನ | 20 | 19.56 |
| | | ನವೀಕರಣ | 29 | 24.10 |
| 4 | 2021-22 | ನವೀಕರಣ | 26 | 20.72 |

ಷರಾ:

- 2021-22 ನೇ ಸಾಲಿನಲ್ಲಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಗೆ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಒಟ್ಟಾರೆ 2097 ಅರ್ಜಿಗಳು ಸ್ವೀಕೃತವಾಗಿರುತ್ತದೆ. 410 ಅರ್ಹ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ರೂ. 360.00 ಲಕ್ಷಗಳ ಸಾಲ/ಸಹಾಯಧನವನ್ನು ಡಿ.ಬಿ.ಟಿ ಮೂಲಕ ಮಂಜೂರು ಮಾಡಲು ಕ್ರಮವಹಿಸಲಾಗಿದೆ.
- 2021-22 ನೇ ಸಾಲಿನ ಅರಿವು ಶೈಕ್ಷಣಿಕ ಸಾಲ ನವೀಕರಣ ವಿದ್ಯಾರ್ಥಿಗಳಿಗೆ ಸುವಿಧಾ ತಂತ್ರಾಂಶದ ಮೂಲಕ ಅರ್ಜಿಗಳನ್ನು ಆಹ್ವಾನಿಸಿದ್ದು, 37 ಅರ್ಜಿಗಳು ಸ್ವೀಕೃತವಾಗಬೇಕಾಗಿರುತ್ತದೆ. ಅದರಲ್ಲಿ 32 ಅರ್ಹ ಅರ್ಜಿಗಳು ಸ್ವೀಕೃತವಾಗಿದ್ದು, 26 ಅರ್ಹ ಫಲಾನುಭವಿಗಳಿಗೆ ಸಾಲ/ಸಹಾಯಧನ ಮಂಜೂರು ಮಾಡಲಾಗಿರುತ್ತದೆ. 6 ಅರ್ಜಿಗಳಿಗೆ ಸಂಬಂಧಿಸಿದಂತೆ ಆಯಾ ಜಿಲ್ಲಾ ಮಟ್ಟದಲ್ಲಿ ದಾಖಲೆಗಳ ಪರಿಶೀಲನೆ ನಡೆಸಲಾಗುತ್ತಿದೆ. 5 ವಿದ್ಯಾರ್ಥಿಗಳ ಪರೀಕ್ಷೆ ಪೂರ್ಣಗೊಳ್ಳದೇ ಇರುವುದರಿಂದ ಅರ್ಜಿಗಳನ್ನು ಸಲ್ಲಿಸಿರುವುದಿಲ್ಲ.
- 2021-22 ನೇ ಸಾಲಿನ ಅರಿವು ಶೈಕ್ಷಣಿಕ ಸಾಲ ನವೀನ ಯೋಜನೆಗೆ ಸರ್ಕಾರದ ಆದೇಶದನ್ವಯ ಅರ್ಜಿಗಳನ್ನು ಆಹ್ವಾನಿಸಲಾಗುವುದು.